For more job news visit : www.kpscvaani.com

ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನ

ದಾವಣಗೆರೆ ಆ.6; ಹೊನ್ನಾಳಿ ತಾಲೂಕಿನ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 5 ಅಂಗನವಾಡಿ ಕಾರ್ಯಕರ್ತೆ ಮತ್ತು 21 ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳಾ ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 9 ಕೊನೆಯ ದಿನ. ಅರ್ಜಿಯನ್ನು ವೆಬ್ ಸೈಟ್ http:88dwcd.karnataka.gov.in ಮತ್ತು http://karnemakaone.kar.nic.in/abcd/ ಸಲ್ಲಿಸಬಹುದು ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.

For more job news visit : www.kpscvaani.com

ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಬಳ್ಳಾರಿ,ಆ.10- ಜಿಲ್ಲೆಯ ನಗರ ಶಿಶು ಅಭಿವೃದ್ಧಿ ಯೋಜನೆಯಡಿ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಹಾಗೂ ಅಂಗನವಾಡಿ ಸಹಾಯಕಿಯರ ಗೌರವ ಸೇವ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ವಿಜಯ್ ಕುಮಾರ್ ಕೆ.ಪೆಟ್ ಅವರು ತಿಳಿಸಿದ್ದಾರೆ.

ಬಳ್ಳಾರಿ (ಗ್ರಾಮಾಂತರ) ಶಿಶು ಅಭಿವೃದ್ಧಿ ಯೋಜನೆಯ ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಖಾಲಿ ಇರುವ 22 ಅಂಗನವಾಡಿ ಕಾರ್ಯಕರ್ತೆ ಹಾಗೂ 55 ಅಂಗನವಾಡಿ ಸಹಾಯಕಿಯರ ಸೇರಿ ಒಟ್ಟು ಒಟ್ಟು 63 ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಮಹಿಳಾ, ವಿಧವೆ, ಅಲ್ಪಸಂಖ್ಯಾತ ಮಹಿಳಾ ಅಭ್ಯರ್ಥಿಗಳು ಅರ್ಜಿದಾರರಾಗಿದ್ದು, ಆಸಕ್ತ ಅಭ್ಯರ್ಥಿಗಳು ಸ.10ರೊಳಗಾಗಿ ಇಲಾಖೆಯ ವೆಬ್ ಸೈಟ್ https://kamemakaone.kar.nic.in/abcd/ ಗೆ ಭೇಟಿ ನೀಡಿ ಅರ್ಜಿ ಸಲ್ಲಿಸ ಬಹುದು.

ಆನ್‌ಲೈನ್ ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:

ಜನನ ಪ್ರಮಾಣ ಪತ್ರ/ಜನನ [illegible] ಇರುವ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ. ಹಿಗದಿತ ವಿದ್ಯಾರ್ಹತೆಯ ಅಂಕಪಟ್ಟಿ ಸಕ್ಷಮ ಪ್ರಾಧಿಕಾರಿಗಳಿಂದ ಪಡೆದ ಮೂರು (3) ವರ್ಷದೊಳಗಿನ ವಾಸ್ಯಳ ದೃಢೀಕರಣ ಪತ್ರ, ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ, ಪತಿಯ ಮರಣ ಪ್ರಮಾಣ ಪತ್ರ ಹಾಗೂ ವಿಧವಾ ಪ್ರಮಾಣ ಪತ್ರ (ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸುವಂತಿಲ್ಲ).

ಅಂಗವಿಕಲತ ಪ್ರಮಾಣಪತ್ರ (ಅಂಗವಿಕಲ ವೇತನದ ದೃಢೀಕರಣವನ್ನು ಪರಿಗಣಿಸುವಂತಿಲ್ಲ). ವಿಚ್ಛೇದನ ಪ್ರಮಾಣ ಪತ್ರ (ನ್ಯಾಯಾಲಯದಿಂದ ಪಡೆದಿರಬೇಕು). ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ಸಬಸ್ಸುಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ. ಇಲಾಖೆಯ ಸುಧಾರಣಾ ಸಂಸ್ಥೆ, ರಾಜ್ಯ ಮಹಿಳಾ ನಿಲಯಗಳ ನಿವಾಸಿಗಳು ಕನಿಷ್ಠ 03 ವರ್ಷ ಸಂಸ್ಥೆಯಲ್ಲಿರಬೇಕು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ [illegible] ಅಧಿಕಾರಿಗಳಿಂದ ಪಡೆದ [illegible] ಪ್ರಮಾಣ ಪತ್ರ, ಯೋಜನಾ [illegible] ಬಗ್ಗೆ ತಹಶೀಲ್ದಾರರಿಂದ ಪಡೆದ [illegible] ಪತ್ರ, ಆಧಾರ್ ಕಾರ್ಡ್ [illegible] ಗುರುತಿನ ಚೀಟಿ, ರೇಷನ್ ಕಾರ್ಡ್, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಪಡೆದ ದೃಢೀಕರಣ ಪತ್ರ, [illegible] ದಾಖಲಾತಿಗಳನ್ನು ಪಠ್ಯಾಂಕಿತ ಅಧಿಕಾರಿಗಳಿಂದ ದೃಢೀಕರಣ ಮಾಡಿಸಿ ಸಲ್ಲಿಸಬೇಕು.

ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ವಿದ್ಯಾರ್ಹತೆ:

ದ್ವಿತೀಯ ಪಿಯುಸಿ ತೇರ್ಗಡೆ ಹೊಂದಿದ್ದು, ಎಸ್‌ಎಸ್‌ಎಲ್‌ಸಿಯಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಓದಿರಬೇಕು.

ಅಂಗನವಾಡಿ ಸಹಾಯಕಿ ವಿದ್ಯಾರ್ಹತೆ:

ಅಂಗನವಾಡಿ ಸಹಾಯಕಿ ಹುದ್ದೆಗೆ ಎಸ್‌ಎಸ್‌ಎಲ್‌ಸಿ ವಿದ್ಯಾರ್ಹತೆ ಹೊಂದಿದ್ದು, ತೃಪ್ತಿಕರ ತರಗತಿಯಲ್ಲಿ ಉತ್ತೀರ್ಣವಾಗಿರಬೇಕು.

ಸೂಚನೆ:

ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳಿಗೆ ಅರ್ಜಿಗಳನ್ನು ಆನ್‌ಲೈನ್ ಮೂಲಕವೇ ಮಾತ್ರ ಸಲ್ಲಿಸತಕ್ಕದ್ದು, ಇತರೇ ಯಾವುದೇ ಮೂಲದಿಂದ ಸಲ್ಲಿಸಲು ಅವಕಾಶವಿರುವುದಿಲ್ಲ, ಅವುಗಳನ್ನು ಪರಿಗಣಿಸಲಾಗುವುದಿಲ್ಲ.

ಆಸಕ್ತ ಅಭ್ಯರ್ಥಿಗಳು ಅರ್ಜಿಗಳನ್ನು ಪೂರ್ತಿ ಮಾಡಿ, ಕಡ್ಡಾಯವಾಗಿ ಅವಶ್ಯಕವಾಗಿರುವ ಮೂಲ ದಾಖಲೆಗಳನ್ನು ಸ್ಪಷ್ಟವಾಗಿ ಸ್ಕಾನ್ ಮಾಡಿ, ಅಪ್‌ಲೋಡ್ ಮಾಡಿ ಅರ್ಜಿ ಸಲ್ಲಿಸಬೇಕು.

ಆನ್‌ಲೈನ್ ಮೂಲಕವೇ ಎಲ್ಲಾ ಅಗತ್ಯ ದಾಖಲಾತಿಗಳನ್ನು ಸಲ್ಲಿಸುವುದು, ತದನಂತರ ಸಲ್ಲಿಸುವ ದಾಖಲಾತಿಗಳನ್ನು ಪರಿಗಣಿಸುವುದಿಲ್ಲ. ಆನ್‌ಲೈನ್ ಅರ್ಜಿಯೊಂದಿಗೆ ಯಾವುದೇ ಅಗತ್ಯ ದಾಖಲೆಯನ್ನು ಸಲ್ಲಿಸದೇ ಇದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಮತ್ತು ಅಸ್ಪಷ್ಟ ಅಥವಾ ಅಪೂರ್ಣ ದಾಖಲೆಗಳನ್ನು ಪರಿಗಣಿಸುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ನಗರದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಅಥವಾ ದೂ.08392-268609 ಮತ್ತು ಬಳ್ಳಾರಿ ಗ್ರಾಮಾಂತರ ದೂ.08392266080 ಗೆ ಸಂಪರ್ಕಿಸ ಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.